# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ:: ಫಾರ್ಚುನ್ ಫೈವ್ ಹೈಡಲ್ ಪ್ರಾಜೇಕ್ಟ್ಸ್ ಪ್ರೈವೇಟ್ ಲಿಮಿಟೆಡ್ ರವರಿಗೆ ಮಂಜೂರಾಗಿರುವ 128 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 210 ಮೆ.ವ್ಯಾಗೆ ಹೆಚ್ಚಿಸುವ ಕುರಿತು.

**ಓದಲಾಗಿದೆ:** 1) ಸರ್ಕಾರಿ ಆದೇಶ ಸಂಖ್ಯೆ: ಇಎನ್ 316 ಎನ್‌ಸಿಇ 2006 ದಿನಾಂಕ: 16.10.2006.
2) ಸರ್ಕಾರಿ ಆದೇಶ ಸಂಖ್ಯೆ: ಇಎನ್ 253 ಎನ್‌ಸಿಇ 2011 ದಿನಾಂಕ: 02.01.2012.
3) ಸರ್ಕಾರಿ ಆದೇಶ ಸಂಖ್ಯೆ: ಇಎನ್ 143 ಎನ್‌ಸಿಇ 2012 ದಿನಾಂಕ: 24.01.2013.
4) ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 143 ಎನ್‌ಸಿಇ 2012 ದಿನಾಂಕ: 22.05.2014.
5) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: KRED/08/FFHPPL-128 to 210 MW (GBWEPL-30 MW)/2014/5382 ದಿನಾಂಕ: 22.12.2014.

5೩೩
26/02/15

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶದಲ್ಲಿ ಮೆ: ಫಾರ್ಚುನ್ ಫೈವ್ ಹೈಡಲ್ ಪ್ರಾಜೇಕ್ಟ್ಸ್ ಪ್ರೈವೇಟ್ ಲಿಮಿಟೆಡ್ ರವರಿಗೆ ಬಿಜಾಪುರ ಜಿಲ್ಲೆಯ ವಿವಧ ಪ್ರದೇಶಗಳಲ್ಲಿ 62.00 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಸರ್ಕಾರಿ ಆದೇಶದಲ್ಲಿ ಮೆ: ಫಾರ್ಚುನ್ ಫೈವ್ ಹೈಡಲ್ ಪ್ರಾಜೇಕ್ಟ್ಸ್ ಪ್ರೈವೇಟ್ ಲಿಮಿಟೆಡ್ ರವರಿಗೆ ಬಿಜಾಪುರ ಜಿಲ್ಲೆಯ ಇಂಗಳೇಶ್ವರ, ರಾಬಿನಹಾಳ್, ರಾಮನಹಟ್ಟಿ, ಹಂಚಿನಾಳ್, ಸಾಲವಡಗಿ, ಬೂದಿಹಾಳ್ ಗ್ರಾಮದಲ್ಲಿ ಹಂಚಿಕೆಯಾಗಿದ್ದ ಅಂಶಿಕ 35.00 ಮೆ.ವ್ಯಾ. ಸಾಮರ್ಥ್ಯದಲ್ಲಿ 32 ಮೆ.ವ್ಯಾ. ಸಾಮರ್ಥ್ಯದ ಯೋಜನೆಯನ್ನು 128 ಮೆ.ವ್ಯಾಗೆ ಹೆಚ್ಚಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಸರ್ಕಾರಿ ಆದೇಶದಲ್ಲಿ ಮೆ: ಫಾರ್ಚುನ್ ಫೈವ್ ಹೈಡಲ್ ಪ್ರಾಜೇಕ್ಟ್ಸ್ ಪ್ರೈವೇಟ್ ಲಿಮಿಟೆಡ್ ರವರಿಗೆ ಬಿಜಾಪುರ ಜಿಲ್ಲೆಯ ಇಂಗಳೇಶ್ವರ, ರಾಬಿನಹಾಳ್, ರಾಮನಹಟ್ಟಿ, ಹಂಚಿನಾಳ್, ಸಾಲವಡಗಿ, ಬೂದಿಹಾಳ್ ಗ್ರಾಮದಲ್ಲಿ ಮಂಜೂರಾಗಿರುವ 128.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲು ಕಾಲಾವಕಾಶವನ್ನು ದಿನಾಂಕ: 01.08.2012 ರಿಂದ ದಿನಾಂಕ: 31.07.2015 ರವರೆಗೆ ವಿಸ್ತರಿಸಿ ಆದೇಶಿಸಲಾಗಿತ್ತು. ತದನಂತರ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಪಿಪಿಎ/ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿ ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ತಿದ್ದುಪಡಿ ಆದೇಶ ಹೊರಡಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ: ಫಾರ್ಚುನ್ ಫೈವ್ ಹೈಡಲ್ ಪ್ರಾಜೇಕ್ಟ್ಸ್ ಪ್ರೈವೇಟ್ ಲಿಮಿಟೆಡ್ ರವರಿಗೆ ಬಿಜಾಪುರ ಜಿಲ್ಲೆಯ ಇಂಗಳೇಶ್ವರ, ರಾಬಿನಹಾಳ್, ರಾಮನಹಟ್ಟಿ, ಹಂಚಿನಾಳ್, ಸಾಲವಡಗಿ, ಬೂದಿಹಾಳ್ ಗ್ರಾಮದಲ್ಲಿ ಮಂಜೂರಾಗಿರುವ 128 ಮೆ.ವ್ಯಾ. ಸಾಮರ್ಥ್ಯದೊಂದಿಗೆ ಸದರಿ ಸ್ಥಳದಲ್ಲಿ ಹಂಚಿಕೆಯಾಗಿದ್ದ 3.00 ಮೆ.ವ್ಯಾ. ಸಾಮರ್ಥ್ಯವು ಸೇರಿದಂತೆ 101 ಮೆ.ವ್ಯಾ. ಸಾಮರ್ಥ್ಯವನ್ನು ಅನುಷ್ಠಾನಗೊಳಿಸಿರುವುದಾಗಿ ಹಾಗೂ 30 ಮೆ.ವ್ಯಾ. ಸಾಮರ್ಥ್ಯವನ್ನು ವಿವಿಧ ಹೂಡಿಕೆದಾರರಿಗೆ ವರ್ಗಾಯಿಸಿ ಅನುಷ್ಠಾನಗೊಳಿಸಿರುವುದಾಗಿ ತಿಳಿಸಿರುತ್ತಾರೆ. ಈಗಾಗಲೇ ಸದರಿ ಕಂಪನಿಯವರಿಗೆ ಮಂಜೂರಾಗಿದ್ದ 131 (128+3) ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಿರುವುದಾಗಿ ತಿಳಿಸುತ್ತಾ, ಪ್ರಸ್ತುತ ಸದರಿ ಪ್ರದೇಶದಲ್ಲಿ ಮಂಜೂರಾಗಿದ್ದ 128 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 210 ಮೆ.ವ್ಯಾಗೆ ಹೆಚ್ಚಿಸುವ ಕುರಿತಂತೆ ವಿಸ್ತೃತ ಯೋಜನಾ

---2)

Wind Section
Ward No. 15134
Date: 03-03-15
Sig.

ವರದಿಯನ್ನು ತಯಾರಿಸಿ ಸಲ್ಲಿಸಿರುತ್ತಾರೆ ಮತ್ತು ಹೆಚ್ಚಳಗೊಂಡ ಸಾಮರ್ಥ್ಯದಿಂದ 30 ಮೆ.ವ್ಯಾ. ಸಾಮರ್ಥ್ಯವನ್ನು ಮೆ: ಗ್ರೀನ್‌ಕೋ ಬಾಗೇವಾಡಿ ವಿಂಡ್ ಎನರ್ಜಿಸ್ ಪ್ರೈ.ಲಿ., ರವರಿಗೆ ವರ್ಗಾಯಿಸುವ ಕುರಿತಂತೆ ಅಭಿವೃದ್ಧಿದಾರರು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಸಲ್ಲಿಸಿರುವುದಾಗಿ ತಿಳಿಸಿರುತ್ತಾರೆ. ಮುಂದುವರೆದು, ಹೆಚ್ಚಳಗೊಳ್ಳಲಿರುವ 82 ಮೆ.ವ್ಯಾ. ಸಾಮರ್ಥ್ಯಕ್ಕೆ ನಿಗದಿತ ಶುಲ್ಕ ಪಾವತಿಸಿಕೊಂಡಿರುವುದಾಗಿ ಹಾಗೂ 30 ಮೆ.ವ್ಯಾ. ಸಾಮರ್ಥ್ಯಕ್ಕೆ ವರ್ಗಾವಣೆ ಶುಲ್ಕ ಪಾವತಿಸಿರುವುದಾಗಿ ತಿಳಿಸುತ್ತಾ, ಯೋಜನೆಯು ಖಾಸಗಿ ಜಮೀನಿನಲ್ಲಿ ಬರುತ್ತಿರುವುದಾಗಿ, ಉತ್ಪಾದನೆಯಾಗುವ ವಿದ್ಯುತ್ತನ್ನು ಪಿಪಿಎ/ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಷರತ್ತಿನೊಂದಿಗೆ ಸಾಮರ್ಥ್ಯ ಹೆಚ್ಚಿಸುವ ಹಾಗೂ ವರ್ಗಾವಣೆ ಪ್ರಸ್ತಾವನೆಯನ್ನು ಅನುಮೋದಿಸಬಹುದೆಂಬ ಅಭಿಪ್ರಾಯದೊಂದಿಗೆ ಪ್ರಸ್ತಾವನೆಯನ್ನು ಶಿಫಾರಸ್ಸಿಸಿ, ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಅಭಿವೃದ್ಧಿದಾರರು ಸರ್ಕಾರಕ್ಕೆ ಸಲ್ಲಿಸಿರುವ ದಿನಾಂಕ: 11.02.2015 ರ ಮನವಿಯಲ್ಲಿ ತಮ್ಮ ಕಂಪನಿಗೆ ಮಂಜೂರಾಗಿದ್ದ 128 ಮೆ.ವ್ಯಾ. ಸಾಮರ್ಥ್ಯದ ಯೋಜನೆಯನ್ನು ಅನುಷ್ಠಾನಗೊಳಿಸಲು ದಿನಾಂಕ: 31.07.2015 ರವರೆಗೆ ಕಾಲಾವಕಾಶವಿದ್ದಾಗ್ಯೂ, ಸದರಿ ಸಾಮರ್ಥ್ಯವನ್ನು ಇನ್ನೂ 13 ತಿಂಗಳು ಕಾಲಾವಧಿ ಬಾಕಿ ಇರುವಾಗಲೇ ಅನುಷ್ಠಾನಗೊಳಿಸಿರುವುದಾಗಿ ತಿಳಿಸುತ್ತಾ, ಪ್ರಸ್ತುತ ಹೆಚ್ಚಳಗೊಳ್ಳಲಿರುವ 82 ಮೆ.ವ್ಯಾ. ಸಾಮರ್ಥ್ಯದ ಯೋಜನೆಯನ್ನು ಅನುಷ್ಠಾನಗೊಳಿಸಲು 3 ವರ್ಷಗಳ ಕಾಲಾವಕಾಶ ನೀಡುವಂತೆ ಹಾಗೂ ಸದರಿ ಪ್ರಸ್ತಾವನೆಯಲ್ಲಿ ವರ್ಗಾವಣೆಗೊಳ್ಳಲಿರುವ 30 ಮೆ.ವ್ಯಾ. ಸಾಮರ್ಥ್ಯದ ಯೋಜನೆಗೆ ಪ್ರತ್ಯೇಕ ಸರ್ಕಾರಿ ಆದೇಶ ನೀಡುವಂತೆ ಕೋರಿರುವುದರಿಂದ ನವೀಕರಿಸಬಹುದಾದ ಇಂಧನ ಯೋಜನೆಗಳನ್ನು ಉತ್ತೇಜಿಸುವ ಹಿನ್ನಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 278 ಎನ್‌ಸಿಇ 2014,**
**ಬೆಂಗಳೂರು, ದಿನಾಂಕ: 24.02.2015.**

ಮೆ: ಫಾರ್ಚುನ್ ಫೈವ್ ಹೈಡಲ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಬಿಜಾಪುರ ಜಿಲ್ಲೆಯ ಇಂಗಳೇಶ್ವರ, ರಾಬಿನಹಾಳ್, ರಾಮನಹಟ್ಟಿ, ಹಂಚಿನಾಳ್, ಸಾಲವಡಗಿ, ಬೂದಿಹಾಳ್ ಗ್ರಾಮದಲ್ಲಿ ಮಂಜೂರಾಗಿರುವ 128 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 210 ಮೆ.ವ್ಯಾಗೆ ಹೆಚ್ಚಿಸಿ, ಈ ಕೆಳಕಂಡ ಷರತ್ತಿಗೊಳಪಟ್ಟು ಆದೇಶಿಸಿದೆ.

1. ಮೆ: ಫಾರ್ಚುನ್ ಫೈವ್ ಹೈಡಲ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾಧ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಮೆ: ಫಾರ್ಚುನ್ ಫೈವ್ ಹೈಡಲ್ ಪ್ರಾಜೆಕ್ಟ್ಸ್ ಪ್ರೈವೇಟ್ ಲಿಮಿಟೆಡ್ ರವರು ಉತ್ಪಾದಿಸುವ ವಿದ್ಯುತ್ತನ್ನು ಸಂಬಂಧಿಸಿದ ಎಸ್ಕಾಂನೊಂದಿಗೆ ವಿದ್ಯುತ್ ಖರೀದಿ ಒಪ್ಪಂದ (ಪಿಪಿಎ) ಮಾಡಿಕೊಳ್ಳಲು ಅಥವಾ 3ನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ.
3. ಸದರಿ ಯೋಜನೆಯನ್ನು ಈ ಆದೇಶದ ದಿನಾಂಕದಿಂದ 3 ವರ್ಷದ ಅವಧಿಯಲ್ಲಿ ಅನುಷ್ಠಾನಗೊಳಿಸತಕ್ಕದ್ದು.
4. ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಹಂಚಿಕೆ ಆದೇಶದ ಇತರೆ ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☏ 22034674.

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

---3)

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ಬೆಂಗಳೂರು-1.
2 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
6 ಜಿಲ್ಲಾಧಿಕಾರಿಗಳು, ಬಿಜಾಪುರ ಜಿಲ್ಲೆ, ಬಿಜಾಪುರ.
7 ಉಪ ಅರಣ್ಯ ಸಂರಕ್ಷಣಾಧಿಕಾರಿ ಬಿಜಾಪುರ ಜಿಲ್ಲೆ, ಬಿಜಾಪುರ .
8 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ
9 M/s Fortune Five Hydel Projects Private Limited, 701-702, Prestige Meridian-2, No. 30, MG Road, Bengaluru-560 001.
10 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.